ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ
"ಜ್ಞಾನ ಸಾಗರ" ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ - 583 105
VIJAYANAGARA SRI KRISHNADEVARAYA UNIVERSITY
"Jnana Sagara" Campus, Vinayaka Nagara, Cantonment, Ballari - 583 105
ಕುಲಸಚಿವರು
08392-242703
08392-242097

ಸಂಖ್ಯೆ: ವಿಶ್ರೀಕೃವಿಬ/ವಿಮವಿ/ಸ್ನಾತಕೋತ್ತರ/ಸುತ್ತೋಲೆ/2021-22/171 ದಿನಾಂಕ: 27.04.2021

# ಸುತ್ತೋಲೆ

ವಿಷಯ: ಕೋವಿಡ್-19 ಎರಡನೇ ಅಲೆಯ ಹಿನ್ನೆಲೆಯಲ್ಲಿ ಸ್ನಾತಕೋತ್ತರ 2, 4 ಮತ್ತು 6 ನೇ ಸೆಮಿಸ್ಟರ್ ತರಗತಿಗಳನ್ನು ಆನ್‌ಲೈನ್ ಮೂಲಕ ತೆಗೆದುಕೊಳ್ಳುವ ಕುರಿತು.

ಉಲ್ಲೇಖ: 1. ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳ ಸಭೆಯ ದಿನಾಂಕ. 22.04.2021
2. ರಾಜ್ಯ ಸರ್ಕಾರದ ಮಾರ್ಗಸೂಚಿ ದಿನಾಂಕ. 26.04.2021
3. ಮಾನ್ಯ ಕುಲಪತಿಗಳ ನಿರ್ದೇಶನ ದಿನಾಂಕ. 27.04.2021

***

ಈ ಸುತ್ತೋಲೆ ಮೂಲಕ ವಿಶ್ವವಿದ್ಯಾಲಯದ ಎಲ್ಲಾ ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳು, ಸ್ನಾತಕೋತ್ತರ ಕೇಂದ್ರಗಳ ನಿರ್ದೇಶಕರುಗಳು ಹಾಗೂ ಸ್ನಾತಕೋತ್ತರ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳ ಗಮನಕ್ಕೆ ತರುವುದೇನೆಂದರೆ ರಾಷ್ಟ್ರಾದ್ಯಂತ ಕೋವಿಡ್-19 ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿದ್ದು ಶೈಕ್ಷಣಿಕ ಚಟುವಟಿಕೆಗಳನ್ನು ರಾಜ್ಯ ಸರ್ಕಾರದ ನಿರ್ದೇಶನದ ಮೇರೆಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ. ದಿನಾಂಕ. 22.04.2021 ರಂದು ಜರುಗಿದ ವಿಭಾಗಗಳ ಮುಖಸ್ಥರುಗಳ ಹಾಗೂ ಡೀನರುಗಳ ಸಭೆಯಲ್ಲಿ ತೆಗೆದುಕೊಂಡ ನಿರ್ಧಾರದಂತೆ 2020-21 ನೇ ಸಾಲಿನ ಸ್ನಾತಕೋತ್ತರ 2, 4 ಮತ್ತು 6 ನೇ ಸೆಮಿಸ್ಟರ್‌ಗಳ ತರಗತಿಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಅಭ್ಯುದಯವನ್ನು ಪರಿಗಣಿಸಿ ದಿನಾಂಕ. 03.05.2021 ರಿಂದ ಅನ್ವಯಿಸಿ ಆನ್‌ಲೈನ್ ಮುಖಾಂತರ ಜರುಗಿಸಲು ಸೂಚಿಸಲಾಗಿದೆ. ಸ್ಮಾರ್ಟ್ ಫೋನ್, ಲ್ಯಾಪ್‌ಟಾಪ್ ಹಾಗೂ ಕಂಪ್ಯೂಟರ್‌ಗಳ ಸೌಲಭ್ಯ ಹೊಂದಿರದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ವಿವಿಧ ತರಗತಿಗಳ ಬೋಧನಾ ಪಠ್ಯವು ವಿಶ್ವವಿದ್ಯಾಲಯ, ಮಹಾವಿದ್ಯಾಲಯಗಳ ಜಾಲತಾಣ, ಯುಟ್ಯೂಬ್ ಹಾಗೂ ಈ-ಮೇಲ್ ಮುಖಾಂತರ ವಿದ್ಯಾರ್ಥಿಗಳಿಗೆ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲು ನಿರ್ದೇಶಿಸಲಾಗಿದೆ.

ಮುಂದುವರೆದು, ಸದರಿ ವಿಷಯವನ್ನು ಸಂಬಂಧಪಟ್ಟ ಎಲ್ಲಾ ಬೋಧಕ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತರಲು ಸೂಚಿಸಲಾಗಿದೆ. ಕಾಲಕಾಲಕ್ಕೆ ಸರ್ಕಾರ/ವಿಶ್ವವಿದ್ಯಾಲಯವು ಹೊರಡಿಸುವ ಕೋವಿಡ್-19 ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಿದೆ.

27.4.21
ಕುಲಸಚಿವರು
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ

ಗೆ,
1. ವಿಶ್ವವಿದ್ಯಾಲಯದ ಎಲ್ಲಾ ಅಧ್ಯಯನ ವಿಭಾಗಗಳ ಮುಖಸ್ಥರುಗಳಿಗೆ,
2. ಸ್ನಾತಕೋತ್ತರ ಕೇಂದ್ರಗಳ ನಿರ್ದೇಶಕರುಗಳಿಗೆ,
3. ಸ್ನಾತಕೋತ್ತರ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ,

ಪ್ರತಿಗಳು:
1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
2. ಕುಲಸಚಿವರು(ಮೌಲ್ಯಮಾಪನ), ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
3. ಕಛೇರಿ ಪ್ರತಿ